**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ.**

**ವಿಷಯ:**ರಾಜ್ಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಧ, ಶ್ರವಣ ನ್ಯೂನ್ಯತೆ ಮತ್ತು ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಕರು, ಸಂಗೀತ ಶಿಕ್ಷಕರು ದರ್ಜೆ-3 ಮತ್ತು ಪೌಢ ಶಾಲೆಯ ಸಂಗೀತ ಶಿಕ್ಷಕರ ದರ್ಜೆ-2ರ ಹುದ್ದೆಯ ಮೂಲವೇತನ ಶ್ರೇಣಿ ವ್ಯತ್ಯಾಸವಿರುವ ಬಗ್ಗೆ ಹಲವುಬಾರಿ ಸರ್ಕಾರದ ಗಮನಕ್ಕೆ ತಂದಿದರು ಕೂಡ ಯಾವುದೇ ಕ್ರಮಕೈಗೊಂಡಿಲ್ಲ ಹಾಗೂ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು 2004 ರಿಂದ ಇಲ್ಲಿಯವರೆಗೆ ಸಮಗ್ರವಾಗಿ ಪರಿಷ್ಕರಣೆ ಮಾಡವಂತೆಯೂ ಹಲವಾರು ಬಾರಿ ಮನವಿ ಮಾಡುತ್ತಾ ಬಂದಿದ್ದರು ಇಲ್ಲಿಯವರೆಗೂ ಪರಿಷ್ಕರಣೆಗೊಂಡಿರುವುದಿಲ್ಲ.

ಇನ್ನೊಂದೆಡೆ ಇಲಾಖೆಯಲ್ಲಿನ ಕೆಲವು ವೃಂದದ ನೌಕರರಿಗೆ ಮುಂಬಡ್ತಿ ನೀಡಲು ಸರ್ಕಾರದ ಆದೇಶವಾಗಿದ್ದರೂ ಕೂಡ ಮುಂಬಡ್ತಿ ನೀಡಲು ಕೂಡ ವಿಳಂಬ ಮಾಡಲಾಗುತ್ತಿದೆ ಇದರಿಂದಾಗಿ ಸರ್ಕಾರಿ ಅಂಧ, ಶ್ರವಣ ನ್ಯೂನ್ಯತೆ ಮತ್ತು ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಕರು. ಸಂಗೀತ ಶಿಕ್ಷಕರು ಸಂಕಷ್ಟದಲ್ಲಿ ಸಿಲುಕಿದ್ದು ಈ ಬಗ್ಗೆ ಶೀಘ್ರವಾಗಿ ಕ್ರಮಕೈಗೊಂಡು ಅನುಕೂಲ ಮಾಡಿಕೊಡಬೇಕೆಂಬ ವಿಷಯದ ಕುರಿತು.

******

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಧ ಮತ್ತು ಶ್ರವಣನ್ಯೂನತೆವುಳ್ಳ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು, ಸಂಗೀತ ಶಿಕ್ಷಕರು ದರ್ಜೆ-3 ಮತ್ತು ಪೌಢ ಶಾಲೆಯ ಸಂಗೀತ ಶಿಕ್ಷಕರು ದರ್ಜೆ-2ರ ಹುದ್ದೆಯ ಮೂಲವೇತನ ಶ್ರೇಣಿ ವ್ಯತ್ಯಾಸವಿರುವುದು ಗಮನಕ್ಕೆ ಬಂದಿದ್ದು, ಈ ಸಂಬಂಧ ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ವೇತನ ಶ್ರೇಣಿಯಲ್ಲಿನ ವೇತನ ತಾರತಮ್ಯವನ್ನು ಸರಿಪಡಿಸಿ ಶಿಕ್ಷಣ ಇಲಾಖೆಯಲ್ಲಿರುವಂತೆ ನಿಯಮಾನುಸಾರ ವೇತನ ಶ್ರೇಣಿಯನ್ನು ತಿದ್ದುಪಡಿ ಮಾಡುವ ಸಂಬಂಧ ಸ್ವಿಕೃತವಾದ ಪ್ರಸ್ತಾವನೆಯಲ್ಲಿ ಆರ್ಥಿಕ ಪರಿಣಾಮ ಉಂಟಾಗುವುದರಿಂದ ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಿ ಕಡತವನ್ನು ಸಲ್ಲಿಸಲಾಗಿರುತ್ತದೆ.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಪ್ರಥಮ ಬಾರಿಗೆ 416 ಹುದ್ದೆಗಳಿಗೆ ಕನಿಷ್ಟ ವಿದ್ಯಾರ್ಹತೆ ಹಾಗೂ ನೇಮಕಾತಿ ವಿಧಾನಗಳನ್ನು ಅಳವಡಿಸಿ ಅಂತಿಮವಾಗಿ 2004ರಲ್ಲಿ ರಾಜ್ಯ ಪತ್ರದಲ್ಲಿ ಪ್ರಕಟಗೊಂಡಿರುತ್ತದೆ. ತದನಂತರ 2004 ರಿಂದ ಇತ್ತೀಚಿನವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ವಿಲೀನಗೊಂಡ ಹಾಗೂ ಹೊಸದಾಗಿ ಸೃಜನೆಗೊಂಡಂತಹ

ಹುದ್ದೆಗಳನ್ನು ಒಳಗೊಂಡಂತೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲು ಕ್ರಮವಹಿಸಲಾಗುತ್ತಿದೆ. ಈ ಸಂಬಂಧ ಸಚಿವಾಲಯದಡಿ ಬರುವ ಕ್ಷೇತ್ರಿಯ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಶೀಘ್ರವಾಗಿ ಕೈಗೊಂಡು ಪೂರ್ಣಗೊಳಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ನೇಮಕಗೊಂಡಿರುವ ಸಮಾಲೋಚಕರೊಂದಿಗೆ ಚರ್ಚಿಸಿ, ನಂತರ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು) ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನಾ ಇಲಾಖೆಗಳೊಂದಿಗೆ ಸಮಾಲೋಚಿಸಿ, ಸಚಿವ ಸಂಪುಟದ ಅನುಮೋದನೆ ಪಡೆದು, ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು.

ಇಲಾಖೆಯ ಚಾಲ್ತಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಗ್ರೂಪ್ ಬಿ, ಗ್ರೂಪ್ ಸಿ ಮತ್ತು ಗ್ರೂಪ್ ಡಿ ಹುದ್ದೆಗಳಲ್ಲಿನ ಅರ್ಹ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡುವ ಸಂಬಂಧ ಅನುಮತಿ ನೀಡಲಾಗಿದ್ದು, ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳಲ್ಲಿ ಅನುಚ್ಛೇದ 371ಜೆ ರಡಿ ಹೈದ್ರಾಬಾದ್ ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಅನ್ವಯಿಸುವಂತೆ ರಾಜ್ಯ ಮಟ್ಟದ ಹಾಗೂ ರಾಜ್ಯ ವ್ಯಾಪ್ತಿ ಸ್ಥಳೀಯ ವೃಂದದ ಹುದ್ದೆಗಳನ್ನು ಗುರುತಿಸಿ, ಅಧಿಸೂಚನೆ ಹೊರಡಿಸಲಾಗಿದೆ ಮತ್ತು ತತ್ಸಂಬಂಧ ಕರಡು ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ. ಸದರಿ ಅಧಿಸೂಚನೆಯು ಅಂತಿಮಗೊಂಡು ರಾಜ್ಯಪತ್ರದಲ್ಲಿ ಪ್ರಕಟಗೊಂಡ ನಂತರ ಇಲಾಖೆಯಲ್ಲಿನ ಅರ್ಹ ಸಿಬ್ಬಂದಿಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನಿಯಮಾನುಸಾರ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು.

**ಸಂಖ್ಯೆ:ಮಮಇ 422 ಪಿಹೆಚ್‌ಪಿ 2025**

(**ಲಕ್ಷ್ಮೀ ಆರ್. ಹೆಬ್ಬಾಳಕರ್**)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
,ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು